27

52

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: 2004-05ನೇ ಸಾಲಿನ ಆಯವ್ಯಯ ಭಾಷಣದನ್ವಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ-ಆದೇಶ.

ಓದಲಾಗಿದೆ:1)ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪತ್ರ ಸಂಖ್ಯೆ: ಕವಶಿಸಸ/ಸಿಆರ್(ಶಿಕ್ಷಣ)-148(ಬಿ)-2004-05 ದಿನಾಂಕ:16.08.2004.

2)ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪತ್ರ ಸಂಖ್ಯೆ: ಕವಶಿಸಸ/ಸಿಆರ್(ಶಿಕ್ಷಣ)-148(ಡಿ)-2004-05 ದಿನಾಂಕ:16.08.2004.

3)ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪತ್ರ ಸಂಖ್ಯೆ: ಕವಶಿಸಸ/ಸಿಆರ್(ಶಿಕ್ಷಣ)-148(ಇ)-2004-05 ದಿನಾಂಕ:16.08.2004.

4)ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪತ್ರ ಸಂಖ್ಯೆ: ಕವಶಿಸಸ/ಸಿಆರ್(ಶಿಕ್ಷಣ)-148(ಸಿ)-2004-05 ದಿನಾಂಕ:16.08.2004.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರಿಂದ (4)ರವರೆಗಿನ ಪತ್ರಗಳಲ್ಲಿ ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರು 2004-05ನೇ ಸಾಲಿನ ಮಾನ್ಯ ಉಪ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಪರಿಶಿಷ್ಟ ಜಾತಿಯ 10 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಹಿಂದುಳಿದ ವರ್ಗದವರಿಗೆ 10 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಹಾಗೂ 5 ಪರಿಶಿಷ್ಟ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಹೊಸದಾಗಿ ಪ್ರಾರಂಭಿಸಲು ಈ ಶಾಲೆಗಳನ್ನು ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಬೇಕೆನ್ನುವ ಬಗ್ಗೆ ಹಾಗೂ ಸದರಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿರ್ವಹಣೆಗಾಗಿ ಈ ಕೆಳಗಿನ ಲೆಕ್ಕ ಶೀರ್ಷಿಕೆಯಡಿ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ.

| | | | |
|---|---|---|---|
| 1 | ಲೆಕ್ಕ ಶೀರ್ಷಿಕೆ 2225-01-277-0-76 | : | ಪರಿಶಿಷ್ಟ ಜಾತಿಯ ವಸತಿ ಶಾಲೆಗಳ ನಿರ್ವಹಣೆಗಾಗಿ ಇದಕ್ಕೆ ಸಂಬಂಧಿಸಿದ ಅನುದಾನ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟಗೆ ಸೇರಿದೆ.(ನೂತನ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆ-ಪರಿಶಿಷ್ಟ ಜಾತಿ) |
| 2 | ಲೆಕ್ಕ ಶೀರ್ಷಿಕೆ 2225-03-277-2-49 | : | ಹೊಸದಾಗಿ ಪ್ರಾರಂಭಿಸುವ ಹಿಂದುಳಿದ ವರ್ಗಗಳ ವಸತಿ ಶಾಲೆಗಳು |

ಈ ವಸತಿ ಶಾಲೆಗಳನ್ನು ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಬೇಕೆಂಬ ಬಗ್ಗೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ. ಕಾರಣ ಈ ಆದೇಶ.

<u>ಸರ್ಕಾರಿ ಆದೇಶ ಸಂಖ್ಯೆ:ಸಕಇ 44 ಮೊದೇಶಾ 2004, ಬೆಂಗಳೂರು,ದಿನಾಂಕ.31.03.2005</u>

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2004-05ನೇ ಸಾಲಿನಿಂದ ಪರಿಶಿಷ್ಟ ಜಾತಿಯವರಿಗೆ 10, ಹಿಂದುಳಿದ ವರ್ಗಗಳಿಗೆ 11 ಹಾಗೂ ಪರಿಶಿ ವರ್ಗದವರಿಗೆ 05ರಂತೆ ಒಟ್ಟು 26 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಈ ಆದೇಶದೊಂದಿ ಲಗತ್ತಿಸಿರುವ ಅನುಬಂಧದಲ್ಲಿ ಸೂಚಿಸಿರುವ ಸ್ಥಳಗಳಲ್ಲಿ ಪ್ರಾರಂಭಿಸಲು ಸರ್ಕಾರವು ಮಂಜೂರಾತಿ ನೀ ಆದೇಶಿಸಿದೆ.

ಅನುಬಂಧದಲ್ಲಿ ಸೂಚಿಸಿರುವ 10 ಪರಿಶಿಷ್ಟ ಜಾತಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಮೂಲಭೂತ ಸೌಕರ್ಯಗಳಿಗೆ ತಗಲುವ ವೆಚ್ಚವನ್ನು ಪ್ರತಿ ಶಾಲೆಗೆ ರೂ.5.00ಲಕ್ಷಗಳಂತೆ ಒಟ್ಟು ರೂ.50.00ಲಕ್ಷಗಳನ್ನು (ಐವತ್ತು ಲಕ್ಷ ರೂ.ಗಳು ಮಾತ್ರ) ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ ಲಿಂಕ್ ಡಾಕ್ಯುಮೆಂಟ್ ಲೆಕ್ಕ ಶೀರ್ಷಿಕೆ 2225-01-277-0-76 ("ನೂತನ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆ-ಪರಿಶಿಷ್ಟ ಜಾತಿ") ರಡಿಯಲ್ಲಿ ಒದಗಿಸಿರುವ ಅನುದಾನವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ ರವರಿಗೆ ಬಿಡುಗಡೆ ಮಾಡಲಾಗಿದೆ. ಸದರಿ ಮೊತ್ತವನ್ನು ಡ್ರಾ ಮಾಡಿ, ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ,ಬೆಂಗಳೂರು ಇವರಿಗೆ ವರ್ಗಾಯಿಸಲು ಆದೇಶಿಸಿದೆ.

ಇದೇ ಅನುಬಂಧದಲ್ಲಿ ಸೂಚಿಸಿರುವ 11 ಹಿಂದುಳಿದ ವರ್ಗದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಮೂಲಭೂತ ಸೌಕರ್ಯಗಳಿಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ-2225-03-277-2-49 ಇದರಡಿಯಲ್ಲಿ ಒದಗಿಸಿರುವ ರೂ.50.00 ಲಕ್ಷಗಳನ್ನು(ರೂ.ಐವತ್ತು ಲಕ್ಷಗಳನ್ನು ಮಾತ್ರ) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಗೆ ಬಿಡುಗಡೆ ಮಾಡಲಾಗಿದೆ. ಈ ಮೊತ್ತವನ್ನು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಸಂದಾಯ ರಶೀದಿಯ ಮೇಲೆ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಮೇಲು ರುಜು ಪಡೆದು ಹಣವನ್ನು ಡ್ರಾ ಮಾಡತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ:ಸಕಇ 92 ಆಂಆಸ(1) 2005,ದಿನಾಂಕ:2-3-2005ರಲ್ಲಿನ ಸಹಮತಿ ಹಾಗೂ ಆದೇಶ ಸಂ:ಎಫ್‌ಡಿ 01 ಟಿಎಫ್‌ಪಿ 2003,ದಿನಾಂಕ:12-06-2003ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ನೀಡಿರುವ ಆರ್ಥಿಕ ಪ್ರತ್ಯಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಶೇಷಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು,
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3) ಆಯುಕ್ತರು, ಹಿಂದುಳಿದ ವರ್ಗಗಳ ಇಲಾಖೆ, ಬೆಂಗಳೂರು
4) ಮುಖ್ಯ ಕಾರ್ಯನಿರ್ವಹಣಾಧಿಕಾರಿ,ಜಿಲ್ಲಾ ಪಂಚಾಯತ್,ಬೆಂಗಳೂರು ನಗರ ಜಿಲ್ಲೆ
5) ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು,
6) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು
7) ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
8) ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
9) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ,ಬೆಂಗಳೂರು
10) ಸರ್ಕಾರದ ಉಪ ಕಾರ್ಯದರ್ಶಿ,-3, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
11) ಸರ್ಕಾರದ ಅಧೀನ ಕಾರ್ಯದರ್ಶಿ-3, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಕಡತಗಳು